**KANNADA PRABHA**

Date: June 26, 2014 Page: 2

Edition: Mysore Language: Kannada



ಮೈಸೂರಿನ ಜಾಕಿ ಕ್ವಾಟ್ರಸ್ ಬಳಿಯ ಸರ್ಕಾರಿ ಉನ್ನತ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಎಸ್‌ಡಿಎಂಐಎಂಡಿ ವಿದ್ಯಾರ್ಥಿಗಳು ನೋಟ್ ಪುಸ್ತಕ ವಿತರಿಸಿದರು.

# ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ ವಿತರಣೆ

ಮೈಸೂರು: ಎಸ್‌ಡಿಎಂಐಎಂಡಿ ಸಂಸ್ಥೆಯ ವಿದ್ಯಾರ್ಥಿಗಳು, ಜಾಕಿ ಕ್ವಾಟ್ರಸ್ ಬಳಿಯ ಸರ್ಕಾರಿ ಉನ್ನತ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ ಮತ್ತು ಸಲಕರಣೆಗಳನ್ನು ವಿತರಿಸಿದರು. ಬಾಡಿಗಾರ್ಡ್ ಲೇನ್‌ನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಡ ಮಕ್ಕಳು ಇದರ ಲಾಭ ಪಡೆದರು. ಒಂದರಿಂದ ಏಳನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಜಾಮಿಟ್ರಿ ಬಾಕ್ಸ್, ಪೆನ್ನು, ಬಣ್ಣದ ಪೆನ್ಸಿಲ್‌ಗಳನ್ನು ಎಸ್‌ಡಿಎಂಐಎಂಡಿ ಸಂಸ್ಥೆ ವಿದ್ಯಾರ್ಥಿಗಳು ವಿತರಿಸಿದರು. ಎಸ್‌ಡಿಎಂಐಎಂಡಿ ಸಂಸ್ಥೆ ಆಡಳಿತಾಧಿಕಾರಿ ಸಿ.ವಿ. ಶ್ರೀಧರ್ ಮಾತನಾಡಿ, ಸಾಮಾಜಿಕ ಜವಾಬ್ದಾರಿಯಿಂದ ನಮ್ಮ ಸಂಸ್ಥೆಯವರು ಕೆಲವು ವರ್ಷದಿಂದ ಪಠ್ಯ ಪುಸ್ತಕ, ಕಂಪ್ಯೂಟರ್‌ಗಳನ್ನು ಶಾಲೆ ಮಕ್ಕಳಿಗೆ ವಿತರಿಸುತ್ತಿರುವುದಾಗಿ ತಿಳಿಸಿದರು. ಶಾಲೆಯ ಮುಖ್ಯ ಶಿಕ್ಷಕ ಎಸ್. ಜವರೇಗೌಡರು ಎಸ್‌ಡಿಎಂಐಎಂಡಿ ಸಂಸ್ಥೆಗೆ ಕೃತಜ್ಞತೆ ಸಲ್ಲಿಸಿದರು.